# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/161 /2021–22. ದಿನಾಂಕ : 10-8-2021

ದಿನಾಂಕ:: 07–08–2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ. ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆನಕೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:143 | 9480684415 |
| 3 | ಶ್ರೀ.ಎಸ್. ಹೇಮಂತಕುಮಾರ್ | ಸಹಾಯಕ ಅಭಿಯಂತರರು (ವಿದ್ಯುತ್) | 9449870535 |
| 4 | ಶ್ರೀ.ಎನ್.ಎಸ್.ಪ್ರಕಾಶ್ ಎ.ಎಸ್.ಐ | ವಿ.ವಿ.ಪುರಂ ಸಂಚಾರಿ ಪೊಲೀಸ್ ಠಾಣೆ | 080–22943029 |
| 5 | ಹರ್ಷ ಪಿ.ಸಿ. | ವಿ.ವಿ.ಪುರಂ ಸಂಚಾರಿ ಪೊಲೀಸ್ ಠಾಣೆ | – |
| 6 | ಶ್ರೀಮತಿ.ಅನ್ನಪೂರ್ಣ ಎ.ಎಸ್.ಐ | ಶಂಕರಪುರಂ ಪೊಲೀಸ್ ಠಾಣೆ | 9741864915 |
| 7 | ಶ್ರೀ.ಯಮನೂರಪ್ಪ ಪಿ.ಸಿ | ಶಂಕರಪುರಂ ಪೊಲೀಸ್ ಠಾಣೆ | |
| 8 | ಶ್ರೀ.ಸುರೇಶ್ | ಪಶುಸಂಗೋಪನೆ ವಿಭಾಗ | 9480685329 |
| 9 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 10 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 11 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 12 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

Scanned by CamScanner

ದಿನಾಂಕ: 07-08-2021 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲಿಗೆ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ವೆಂಕಟೇಶ್ ಮತ್ತು ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ ಎಂ.ಎಂ.ವಿ.ರಸ್ತೆ ಸುತ್ತಮುತ್ತ, ಗೋವಿಂದಪ್ಪ ರಸ್ತೆ ಮತ್ತು ಸರ್ವೆಯರ್ ರಸ್ತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬೀದಿ ನಾಯಿಗಳ ಸಂಖ್ಯೆ ಜಾಸ್ತಿಯಾಗಿದ್ದು, ಇವುಗಳು ಸಾರ್ವಜನಿಕರಿಗೆ ತೊಂದರೆ ಕೊಡುತ್ತಿರುವುದಾಗಿ ತಿಳಿಸಿ ಇವುಗಳ ನಿಯಂತ್ರಣಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಭೆಗೆ ತಿಳಿಸಿದರು. ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ ಬಿಬಿಎಂಪಿ ಪಶು ಸಂಗೋಪನಾ ವಿಭಾಗದ ಅಧಿಕಾರಿಯಾದ ಶ್ರೀ. ಸುರೇಶ್ ರವರು ಮಾತನಾಡಿ ನಾಯಿಗಳ ಸಂತಾನ ಹರಣ ಶಸ್ತ್ರ ಚಿಕಿತ್ಸೆ ಮಾಡುವ ಕಾರ್ಯವು ಪ್ರಗತಿಯಲ್ಲಿದ್ದು ಸದರಿ ಪ್ರದೇಶಗಳಲ್ಲಿರುವ ಸಂತಾನ ಹರಣ ಶಸ್ತ್ರ ಚಿಕಿತ್ಸೆಯಾಗದಿರುವ ನಾಯಿಗಳನ್ನು ಹಿಡಿದು ಅವುಗಳ ಶಸ್ತ್ರ ಚಿಕಿತ್ಸೆ ಮಾಡಿ ಬಿಡಲಾಗುವುದೆಂದು ಸಭೆಗೆ ತಿಳಿಸಿದರು.

ನಂತರ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ..ಓ.ವಿ.ಜಯಕುಮಾರ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಸಂಚಾರ ದಟ್ಟಣೆ ಇರುವ ರಸ್ತೆಗಳಲ್ಲಿ ಬೀದಿ ಹಸುಗಳ ಸಂಖ್ಯೆ ಜಾಸ್ತಿಯಾಗಿದ್ದು, ಇವುಗಳಿಂದಾಗಿ ವಾಹನ ಸವಾರರಿಗೆ ತುಂಬಾ ತೊಂದರೆ ಆಗುತ್ತಿರುವುದಾಗಿ ತಿಳಿಸಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೆಕೆಂದು ಈ ಹಿಂದಿನ ಸಭೆಗಳಲ್ಲಿ ಪ್ರಸ್ತಾಪಿಸಿದ್ದ ವಿಷಯವನ್ನು ಪುನಃ ಪ್ರಸ್ತಾಪಿಸಿ ಕ್ರಮಕೈಗೊಳ್ಳಬೇಕೆಂದು ಕೋರಿದರು. ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ ಪಂಶು ಸಂಗೋಪನಾ ವಿಭಾಗದ ಶ್ರೀ. ಸುರೇಶ್ ರವರು ಮಾತನಾಡಿ ಬೀದಿ ಹಸುಗಳನ್ನು ಹಿಡಿದು ವ್ಯಾನ್‌ಗಳಲ್ಲಿ ತುಂಬಿಕೊಂಡು ಹೋಗುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಬಹಳಷ್ಟು ಸಂದರ್ಭಗಳಲ್ಲಿ ಬೀದಿ ಹಸುಗಳನ್ನು ಹಿಡಿಯುವಾಗ ಹಸುಗಳ ಮಾಲೀಕರುಗಳು ಗಲಾಟೆ ಮಾಡಿ ಸಿಬ್ಬಂಧಿಗಳಿಗೆ ಹೊಡೆದ

Scanned by CamScanner

ಪ್ರಸಂಗಗಳು ನಡೆದಿರುವುದರಿಂದ ಈ ಸಂದರ್ಭದಲ್ಲಿ ಸಂಚಾರ ವಿಭಾಗದ ಪೊಲೀಸ್ ಮತ್ತು ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಪೊಲೀಸರ ಸಹಕಾರವು ಅತ್ಯಗತ್ಯವಾಗಿರುತ್ತದೆಂದು ತಿಳಿಸಿ ಬೀದಿ ಹಸುಗಳನ್ನು ಹಿಡಿಯುವ ಸಮಯದಲ್ಲಿ ಪೊಲೀಸರು ಸಹಕಾರ ನೀಡಬೇಕೆಂದು ಸಭೆಗೆ ತಿಳಿಸಿದರು. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಪೊಲೀಸ್ ಅಧಿಕಾರಿಗಳು ಮಾತನಾಡಿ ಬೀದಿ ಹಸುಗಳನ್ನು ಹಿಡಿಯಲು ಬರುವ ಸಂದರ್ಭದಲ್ಲಿ ನಮಗೆ ಮಾಹಿತಿ ನೀಡಿದರೆ ನಿಮ್ಮೊಂದಿಗೆ ಸಹಕರಿಸುವುದಾಗಿ ಸಭೆಗೆ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಶ್ರೀ.ರಾಮ ಮಂದಿರ ರಸ್ತೆ ಕನ್ಸರ್‌ವೆನ್ಸಿಯಲ್ಲಿ ಬಹಳಷ್ಟು ಹಸುಗಳನ್ನು ಕಟ್ಟಿಕೊಂಡಿದ್ದು ಇದರಿಂದಾಗಿ ಕನ್ಸರ್‌ವೆನ್ಸಿ ರಸ್ತೆಯನ್ನು ಬಂದ್ ಮಾಡಿಕೊಂಡಿದ್ದು ಇದನ್ನು ತೆರವುಗೊಳಿಸಬೇಕೆಂದು ಈ ಹಿಂದಿನ ಸಭೆಗಳಲ್ಲಿ ಪ್ರಸ್ತಾಪಿಸಿದ್ದ ವಿಷಯವನ್ನು ಪುನಃ ಪ್ರಸ್ತಾಪಿಸಿದರು. ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ ಪಶುಸಂಗೋಪನಾ ವಿಭಾಗದ ಅಧಿಕಾರಿಯವರಾದ ಶ್ರೀ.ಸುರೇಶ್ ರವರು ಮಾತನಾಡಿ ಹೆಚ್ಚಿನ ಸಂಖ್ಯೆಯಲ್ಲಿ ಹಸುಗಳನ್ನು ಕಟ್ಟಿಕೊಂಡಿರುವುದರಿಂದ ಈ ಬಗ್ಗೆ ಚರ್ಚಿಸಿ ಒಂದು ದಿನಾಂಕವನ್ನು ಗೊತ್ತುಪಡಿಸಿ ನಮ್ಮ ಜೊತೆ ಕಾನೂನು ಮತ್ತು ಸುವ್ಯವಸ್ಥೆಗಾಗಿ ಪೊಲೀಸ್ ಅಧಿಕಾರಿಗಳು, ಬಿಬಿಎಂಪಿ ಆರೋಗ್ಯ ವಿಭಾಗದ ಅಧಿಕಾರಿಗಳು ಮತ್ತು ಬಿಬಿಎಂಪಿ ಕಾಮಗಾರಿ ವಿಭಾಗದ ಅಧಿಕಾರಿಗಳು ಜಂಟಿಯಾಗಿ ತೆರವುಗೊಳಿಸುವ ಕಾರ್ಯಾಚರಣೆಯನ್ನು ಮಾಡಬೇಕಾಗಿರುತ್ತದೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ತೆರವುಗೊಳಿಸುವ ಕಾರ್ಯಚರಣೆಗೆ ಒಂದು ದಿನಾಂಕವನ್ನು ಗೊತ್ತುಪಡಿಸಲು ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ನಂತರ ವಾರ್ಡ್‌ನ ಅಭಿಯಂತರರು ಮಾತನಾಡಿ ವಾರ್ಡ್ ವ್ಯಾಪ್ತಿಯ ದೊಡ್ಡಮಾವಳ್ಳಿಯ ಕೆಂಪಣ್ಣ ಲೇನ್, ಸ್ವತ್ತಿನ ಸಂಖ್ಯೆ:14/5 ರಲ್ಲಿ "ಒಂಟಿ ಮನೆ" ನಿರ್ಮಾಣ ಮಾಡಲು ಸರ್ಕಾರದ ಧನ ಸಹಾಯ ಕೋರಿ ಶ್ರೀ.ವಿಶ್ವನಾಥ್ ಎಂಬುವವರು ಅರ್ಜಿ ಸಲ್ಲಿಸಿದ್ದು ಮತ್ತು ದೊಡ್ಡ ಮಾವಳ್ಳಿ ಕೆಂಪಣ್ಣ ರಸ್ತೆಯ ಸ್ವತ್ತಿನ ಸಂಖ್ಯೆ: 14/2 ರಲ್ಲಿ "ಒಂಟಿ ಮನೆ" ನಿರ್ಮಿಸಲು ಸರ್ಕಾರದಿಂದ ಧನ ಸಹಾಯ ಕೋರಿ ಶ್ರೀ.ಎನ್. ಮಂಜುನಾಥ್ ರವರು ಅರ್ಜಿ ಸಲ್ಲಿಸಿದ್ದು ಈ ಬಗ್ಗೆ ಮುಂದಿನ ಕ್ರಮವಹಿಸಲು ವಾರ್ಡ್ ಸಮಿತಿ ಸಭೆಯ ಅನುಮೋದನೆ ಅತ್ಯಗತ್ಯವಾಗಿದ್ದು ಈ ಬಗ್ಗೆ ಅನುಮೋದನೆ ಕೋರಿ ಕಡತಗಳನ್ನು ಸಭೆಗೆ ಮಂಡಿಸಿದರು. ಈ ಬಗ್ಗೆ ಚರ್ಚಿಸಿ ಸಭೆಯು ಸರ್ವಾನುಮತದಿಂದ ಮುಂದಿನ ಕ್ರಮ ವಹಿಸಲು ಅನುಮೋದನೆ ನೀಡಿತು.

Scanned by CamScanner

ನಂತರ ವಾರ್ಡ್‌ನ ಅಭಿಯಂತರರು ಪುನಃ ಮಾತನಾಡಿ ವಾರ್ಡ್ ವ್ಯಾಪ್ತಿಯ ಉಪ್ಪಾರಹಳ್ಳಿ, ಸುಶೀಲಾ ರಸ್ತೆಯಲ್ಲಿ ಬಿಬಿಎಂಪಿ ವತಿಯಿಂದ ಹೊಸದಾಗಿ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕ (RO Plants)ವನ್ನು ನಿರ್ವಹಣೆ ಮಾಡುವ ಜವಾಬ್ದಾರಿಯನ್ನು ವಹಿಸಿಕೊಡುವ ಬಗ್ಗೆ ಶಿಫಾರಸ್ಸು ಮಾಡುವಂತೆ ಕೋರಿ ಶ್ರೀ.ಮಂಜುನಾಥ.ಪಿ ಮತ್ತು ಶ್ರೀ.ಶಾಂತಕುಮರ್ ಎಂಬುವವರು ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಿಗೆ ಮನವಿ ಸಲ್ಲಿಸಿದ್ದು, ಇವರುಗಳ ಮನವಿಯನ್ನು ಮಾನವೀಯ ದೃಷ್ಟಿಯಿಂದ ಪರಿಗಣಿಸಿ ಘಟಕದ ನಿರ್ವಹಣೆಗೆ ಸಂಬಂಧಿಸಿದ ಕಾನೂನು, ನಿಯಮ ಮತ್ತು ನಿಬಂಧನೆಗಳಿಗೆ ಒಳಪಟ್ಟು ಇವರುಗಳಿಗೆ ನಿರ್ವಹಣೆಯ ಜವಾಬ್ದಾರಿಯನ್ನು ವಹಿಸಿಕೊಡಲು ಕೋರಿ ಮಾನ್ಯ ಮುಖ್ಯ ಆಯುಕ್ತರು ಬಿಬಿಎಂಪಿ ರವರಿಗೆ ಪತ್ರ ಬರೆದಿರುವುದನ್ನು ಸಭೆಯಲ್ಲಿ ಮಂಡಿಸಿ ಈ ಬಗ್ಗೆ ವಾರ್ಡ್ ಸಮಿತಿಯ ಅನುಮೋದನೆ ನೀಡುವಂತೆ ಕೋರಿದರು. ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ನಿರ್ವಹಣೆಗೆ ಸಂಬಂಧಿಸಿದ ಕಾನೂನು, ನಿಯಮ ಮತ್ತು ನಿಬಂಧನೆಗೊಳಪಟ್ಟು ನಿರ್ವಹಣೆಯ ಜವಾಬ್ದಾರಿಯನ್ನು ಶ್ರೀ.ಮಂಜುನಾಥ ಪಿ ಮತ್ತು ಶ್ರೀ. ಶಾಂತಕುಮಾರ್ ರವರುಗಳಿಗೆ ವಹಿಸಿಕೊಡಲು ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿಗೆಯನ್ನು ನೀಡಲಾಯಿತು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| 10/8/2021 | 10/8/2021 |
| ಕಾರ್ಯದರ್ಶಿಗಳು ಹಾಗೂ<br>ಸಹಾಯಕ ಅಭಿಯಂತರರು<br>ವಾರ್ಡ್ –143 ವಿ. ವಿ.ಪುರಂ | ನೋಡಲ್ ಅಧಿಕಾರಿಗಳು<br>ವಾರ್ಡ್ ಸಂಖ್ಯೆ: 143 ಹಾಗೂ<br>ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) |

Scanned by CamScanner